ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :	712
ಸದಸ್ಯರ ಹೆಸರು:	ಶ್ರೀ ಎಂ. ನಾರಾಯಣಸ್ವಾಮಿ
ಉತ್ತರಿಸಬೇಕಾದ ದಿನಾಂಕ:	17.12.2018
ಉತ್ತರಿಸುವ ಸಚಿವರು:	ಕೃಷಿ ಸಚಿವರು

ಅ	ಬೆಂಗಳೂರು ನಗರ ಜಿಲ್ಲೆಯಲ್ಲಿ ಕೃಷಿ ಭೂಮಿ ಎಷ್ಟಿದೆ ; ಯಾವ ಯಾವ ಬೆಳೆ ಬೆಳೆಯಲು ಸೂಕ್ತವಾಗಿದೆ ;	ಬೆಂಗಳೂರು ನಗರ ಜಿಲ್ಲೆಯಲ್ಲಿ ಖುಷ್ಕಿ ಹಾಗೂ ನೀರಾವರಿ ಭೂಮಿ ಸೇರಿದಂತೆ ಒಟ್ಟಾರೆ 23025 ಹೆ., ಕೃಷಿ ಭೂಮಿ ಇರುತ್ತದೆ. ಈ ಜಿಲ್ಲೆಯಲ್ಲಿರುವ ಭೂಮಿಯು ಈ ಕೆಳಕಂಡ ಬೆಳೆಗಳನ್ನು ಬೆಳೆಯಲು ಯೋಗ್ಯವಾಗಿರುತ್ತದೆ. 1. ಏಕದಳ ಬೆಳೆಗಳು 2. ದ್ವಿದಳಧಾನ್ಯ ಬೆಳೆಗಳು 3. ಎಣ್ಣೆಕಾಳು ಬೆಳೆಗಳು 4. ಕಬ್ಬು
ಆ	ಇಲಾಖೆಯಿಂದ ಯಾವ ಯಾವ ಬೆಳೆಗಳಿಗೆ ಸಬ್ಸಿಡಿ ನೀಡಲಾಗುತ್ತದೆ;	ಇಲಾಖೆಯಿಂದ ಭತ್ತ, ರಾಗಿ, ಮುಸುಕಿನಜೋಳ, ತೊಗರಿ, ಅಲಸಂದೆ, ಶೇಂಗಾ ಬೆಳೆಗಳ ವಿವಿಧ ತಳಿಗಳ ಬಿತ್ತನೆ ಬೀಜಗಳನ್ನು ರಿಯಾಯಿತಿ ದರದಲ್ಲಿ ವಿತರಣೆ ಮಾಡಲಾಗುತ್ತದೆ.
ಇ	ಕೃಷಿ ಇಲಾಖೆಯಿಂದ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ;	ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ, ಲಘುಪೋಷಕಾಂಶಗಳು, ಸಸ್ಯ ಸಂರಕ್ಷಣಾ ಕೀಟನಾಶಕಗಳು, ಟಾರ್ಪಾಲಿನ್, ಕೃಷಿ ಭಾಗ್ಯ ಯೋಜನೆಯಡಿ ಕೃಷಿ ಹೊಂಡ ನಿರ್ಮಾಣ, ಲಘು ನೀರಾವರಿ ಘಟಕಗಳು, ಕೃಷಿಯಂತ್ರೋಪಕರಣಗಳನ್ನು ರಿಯಾಯಿತಿ ದರದಲ್ಲಿ ನೀಡಲಾಗಿದೆ. **ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳು:-** ಪ್ರಸ್ತುತ ಜಲಾನಯನ ಅಭಿವೃದ್ಧಿ ಇಲಾಖೆಯ ವತಿಯಿಂದ ಕೆಳಕಂಡ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಮುಖಾಂತರ ರೈತರಿಗೆ ಸೌಲಭ್ಯಗಳನ್ನು ನೀಡಲಾಗುತ್ತಿದೆ. **1.ಪ್ರಧಾನ ಮಂತ್ರಿ ಕೃಷಿ ಸಿಂಚಯಿ ಯೋಜನೆ:** ಈ ಯೋಜನೆಯಡಿ ಮಣ್ಣು ಮತ್ತು ನೀರು ಸಂರಕ್ಷಣೆಗಾಗಿ ಕಂದಕ ಬದುಗಳು, ಬೋಲ್ಡರ್/ರಬಲ್/ಸಸ್ಯತಡೆಗಳು, ಕೃಷಿ ಹೊಂಡಗಳು, ಚೆಕ್ಕ ತಡೆ ಅಣೆಗಳು, ನಾಲಾಬದುಗಳು, ಖುಷ್ಕಿ ತೋಟಗಾರಿಕೆ, ಕೃಷಿ ಅರಣ್ಯ ಮತ್ತು ಮೇವು ಅಭಿವೃದ್ಧಿ ಮುಂತಾದ ಚಟುವಟಿಕೆಗಳನ್ನು ತಾಂತ್ರಿಕತೆ ಆಧರಿಸಿ ಅನುಷ್ಠಾನ ಮಾಡಲಾಗುತ್ತದೆ. ಯೋಜನಾ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಭೂ ರಹಿತ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಹಿಳೆಯರಿಗಾಗಿ ಸ್ವಸಹಾಯ ಗುಂಪುಗಳನ್ನು ರಚಿಸಲಾಗುತ್ತದೆ. ಸ್ವಸಹಾಯ ಗುಂಪಿನ ಸದಸ್ಯರಿಗೆ ಅಗತ್ಯ ತರಬೇತಿಗಳನ್ನು ನೀಡಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಸುತ್ತು ನಿಧಿಯನ್ನು ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ. **2. ಕರ್ನಾಟಕ ಜಲಾನಯನ ಅಭಿವೃದ್ಧಿ ಕಾರ್ಯಕ್ರಮ-II (ಸುಜಲಾ-III):** ವಿಶ್ವಬ್ಯಾಂಕ್ ನೆರವಿನ ಈ ಯೋಜನೆಯಡಿಯಲ್ಲಿ ಒಣ ಬೇಸಾಯ ಮಾಡುವ ರೈತರ ಹಿತ ಕಾಪಾಡಲು ವಿವಿಧ ಸಂಶೋಧನಾ ಸಂಸ್ಥೆಗಳು ಅಭಿವೃದ್ಧಿಪಡಿಸಿದ ವೈಜ್ಞಾನಿಕ ಆಧಾರಿತ ಆವಿಷ್ಕಾರಗಳನ್ನು ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ಅಳವಡಿಸಿ ಯೋಜನೆಯನ್ನು ಹೆಚ್ಚು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ರೈತರಿಗೆ ಉತ್ಪಾದನೆ ಮತ್ತು ಆದಾಯ ಹೆಚ್ಚಿಸಲು ನೆರವಾಗುತಿದೆ. 3. **ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆಯಾಶ್ರಿತ ಪ್ರದೇಶಾಭಿವೃದ್ಧಿ ಕಾರ್ಯಕ್ರಮ:** NMSA-RAD ಕಾರ್ಯಕ್ರಮವನ್ನು ಮಳೆಯಾಶ್ರಿತ ಪ್ರದೇಶಗಳಲ್ಲಿ ಕನಿಷ್ಠ 100 ಹೆಕ್ಟೇರ್ ಪ್ರದೇಶದಲ್ಲಿ ಆಯ್ದ ಗುಚ್ಛ ಗ್ರಾಮಗಳಲ್ಲಿ

ಅನುಷ್ಠಾನಗೊಳಿಸಲಾಗಿದೆ. NMSA-RAD ಕಾರ್ಯಕ್ರಮದಡಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಸಮಗ್ರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡುತ್ತದೆ. ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಕೃಷಿ ಅರಣ್ಯ ಆಧಾರಿತ ಮಿಶ್ರ ಬೆಳೆ ಪದ್ಧತಿಗಳನ್ನು ಒಬ್ಬ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶ ಮೀರದಂತೆ ಅನುಷ್ಠಾನಗೊಳಿಸಲಾಗಿದೆ.

ಇದರೊಂದಿಗೆ ಮೌಲ್ಯವರ್ಧಿತ ಚಟುವಟಿಕೆಗಳಾದ ಜೇನು ಸಾಕಾಣಿಕೆ, ಸೈಲೇಜ್ ಗುಂಡಿ, ಸಮುದಾಯ ಕೆರೆ, ನೀರು ಎತ್ತುವ ಯಂತ್ರಗಳು, ಎರೆಹುಳು ಸಾಕಾಣಿಕೆ, ನೀರು ಸಂರಕ್ಷಣಾ ಕಾಮಗಾರಿಗಳಾದ ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಇತರೆ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ. ಈ ಎಲ್ಲಾ ಚಟುವಟಿಕೆಗಳಿಂದ ರೈತನ ಆದಾಯದಲ್ಲಿ ಸುಸ್ಥಿರತೆ ತರಲು ಸಾಧ್ಯವಾಗುತ್ತದೆ.

4. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ: ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ತಡೆ ಅಣೆ ನಿರ್ಮಾಣ ಮಾಡುವುದರ ಮೂಲಕ ಹಳ್ಳಗಳಲ್ಲಿ ಹರಿದು ಹೋಗುವ ನೀರನ್ನು ತಡೆಗಟ್ಟಿ ಭೂಮಿಯಲ್ಲಿ ಇಂಗುವಂತೆ ಮಾಡುವುದರ ಮೂಲಕ ಅಂತರ್ಜಲ ಮಟ್ಟವನ್ನು ಹೆಚ್ಚಿಸುವುದು ಹಾಗೂ ಸಂಧಿಗ್ಧ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿಗೆ ನೀರನ್ನು ಬಳಸಿ ಕೃಷಿ ಉತ್ಪಾದನೆ ಹೆಚ್ಚಿಸಲು ನೆರವಾಗುತ್ತದೆ.

ಈ | ಕೃಷಿ ಇಲಾಖೆಯಿಂದ ಬೆಂಗಳೂರು ನಗರ ಜಿಲ್ಲೆಯ ಎಷ್ಟು ಜನರಿಗೆ ಈ ಸೌಲಭ್ಯ ದೊರೆತಿದೆ ?

ಪ್ರಸಕ್ತ 2018-19 ನೇ ಸಾಲಿನಲ್ಲಿ ಕೃಷಿ ಇಲಾಖೆಯ ವಿವಿಧ ಯೋಜನೆಯಡಿ ಸೌಲಭ್ಯ ಪಡೆದ ರೈತರ ಮಾಹಿತಿ ಈ ಕೆಳಕಂಡಂತಿದೆ.

ಸಂಖ್ಯೆಗಳಲ್ಲಿ

	ಆನೇಕಲ್	ಬೆಂ.ಉತ್ತರ	ಒಟ್ಟು
ಬಿತ್ತನೆ ಬೀಜ	3450	1239	4689
ಲಘುಪೋಷಕಾಂಶಗಳು	500	267	767
ಸಸ್ಯ ಸಂರಕ್ಷಣಾ ಕೀಟನಾಶಕಗಳು	875	819	1694
ಟಾರ್ಪಾಲಿನ್‌ಗಳು	1450	932	2382
ಕೃಷಿ ಭಾಗ್ಯ ಯೋಜನೆ ಕೃಷಿ ಹೊಂಡ ನಿರ್ಮಾಣ	158	24	182
ಲಘು ನೀರಾವರಿ ಘಟಕಗಳು	245	25	270
ಕೃಷಿ ಯಂತ್ರೋಪಕರಣಗಳು	1285	60	1345

ಜಲಾನಯನ ಅಭಿವೃದ್ಧಿ ಕಾರ್ಯಕ್ರಮಗಳು:- ಜಲಾನಯನ ಅಭಿವೃದ್ಧಿ ಇಲಾಖಾ ವತಿಯಿಂದ ಪ್ರಸ್ತುತ ವರ್ಷ ಬೆಂಗಳೂರು ನಗರ ಜಿಲ್ಲೆಯ ಆನೇಕಲ್ ತಾಲ್ಲೂಕಿನಲ್ಲಿ 5 ತಡೆ ಅಣೆಗಳನ್ನು ನಿರ್ಮಿಸಿದೆ. ಈ ಯೋಜನೆಯಡಿ 13 ಜನ ಫಲಾನುಭವಿಗಳು ಇದರ ಸೌಲಭ್ಯವನ್ನು ಪಡೆದಿರುತ್ತಾರೆ.

ಸಂಖ್ಯೆ:ಕೃಇ 156 ಕೃಇಕ 2018

(ಎನ್.ಹೆಚ್. ಶಿವಶಂಕರ ರೆಡ್ಡಿ)
ಕೃಷಿ ಸಚಿವರು